ಗಣಕೀಯುಕ್ತಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1555
ಸದಸ್ಯರ ಹೆಸರು : ಶ್ರೀ ಆರ್. ಧರ್ಮಸೇನ
ಉತ್ತರಿಸುವ ಸಚಿವರು : ಸಾರಿಗೆ ಮತ್ತು ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವರು
ಉತ್ತರಿಸುವ ದಿನಾಂಕ : 24.09.2021

ಕ್ರ.ಸಂ	ಪ್ರಶ್ನೆ	ಉತ್ತರ
ಅ.	ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ಎಷ್ಟು ಹಳ್ಳಿಗಳಿಗೆ ಬಸ್ ಸೌಲಭ್ಯ ಕಲ್ಪಿಸಬೇಕಾಗಿದೆ; ಈ ಬಗ್ಗೆ ಸರ್ವೆ ಮಾಡಲಾಗಿದೆಯೇ; ಯಾವಾಗ ಬಸ್ ಸೌಲಭ್ಯ ಕಲ್ಪಿಸಲಾಗುವುದು;	ಮೈಸೂರು ಜಿಲ್ಲಾ ವ್ಯಾಪ್ತಿಯಲ್ಲಿ ಒಟ್ಟು 1225 ಹಳ್ಳಿಗಳಿದ್ದು ಎಲ್ಲಾ ಹಳ್ಳಿಗಳಿಗೂ ಕರಾರಸಾ ನಿಗಮದ ವತಿಯಿಂದ ಸಾರಿಗೆ ಸೌಲಭ್ಯ ಒದಗಿಸಲಾಗಿರುತ್ತದೆ. ಚಾಮರಾಜನಗರ ಜಿಲ್ಲಾ ವ್ಯಾಪ್ತಿಯಲ್ಲಿ ಒಟ್ಟು 582 ಹಳ್ಳಿಗಳಿದ್ದು, 581 ಹಳ್ಳಿಗಳಿಗೆ ಸಾರಿಗೆ ಸೌಲಭ್ಯ ಕಲ್ಪಿಸಲಾಗಿರುತ್ತದೆ. ಉಳಿದ 1 ಹಳ್ಳಿಗೆ (ಬೇಡಗುಳಿ) ನಿಗಮದ ವತಿಯಿಂದ ಸರ್ವೆ ಮಾಡಲಾಗಿದ್ದು, ಸದರಿ ಗ್ರಾಮದ ರಸ್ತೆ ಕಿರಿದಾಗಿರುವುದರಿಂದ ಭಾರಿ ವಾಹನ ಸಂಚರಿಸಲು ಯೋಗ್ಯ ರಸ್ತೆ ಇಲ್ಲದ ಕಾರಣದಿಂದಾಗಿ ಸಾರಿಗೆ ಸೌಲಭ್ಯ ಕಲ್ಪಿಸಲು ಸಾಧ್ಯವಾಗಿರುವುದಿಲ್ಲ. ಆದರೆ ಚಾಮರಾಜನಗರದಿಂದ ಬೇಡನಗುಳಿಗೆ ಒಂದು ಖಾಸಗಿ ಮಿನಿ ಬಸ್ 2 ಸುತ್ತುವಳಿಗಳನ್ನು ಕಾರ್ಯಾಚರಣೆ ಮಾಡುತ್ತಿದೆ.
ಆ.	ಬಸ್ ಸೌಲಭ್ಯವಿಲ್ಲದೆ ಶಾಲಾ ಮಕ್ಕಳಿಗೆ ಮತ್ತು ಸಾರ್ವಜನಿಕರಿಗೆ ತೊಂದರೆಯಾಗುವುದರಿಂದ ಈ ಹಳ್ಳಿಗಳಿಗೆ ಬಸ್ ಸೌಲಭ್ಯ ಕಲ್ಪಿಸಲಾಗುವುದು ಯಾವಾಗ;	ಸಾರ್ವಜನಿಕ ಪ್ರಯಾಣಿಕರು ಹಾಗೂ ವಿದ್ಯಾರ್ಥಿಗಳ ಅವಶ್ಯಕತೆಗೆ ಅನುಗುಣವಾಗಿ ಹಂತಹಂತವಾಗಿ ಸಾರಿಗೆಗಳನ್ನು ಹೆಚ್ಚಿಸಿ ಕಾರ್ಯಾಚರಣೆ ಮಾಡಲಾಗುತ್ತಿದೆ. ಬೇಡಗುಳಿ ಗ್ರಾಮದ ರಸ್ತೆ ದುರಸ್ತಿಯಾದ ನಂತರ ಸಾರಿಗೆ ಸೌಲಭ್ಯ ಕಲ್ಪಿಸಲಾಗುವುದು.
ಇ.	ಪ್ರಸಕ್ತ ವರ್ಷದಲ್ಲಿ ಎಷ್ಟು ಹಳ್ಳಿಗಳಿಗೆ ಬಸ್ ಸೌಲಭ್ಯ ಕಲ್ಪಿಸುವ ಉದ್ದೇಶವಿದೆ? ಎಷ್ಟು ದಿನಗಳಲ್ಲಿ ಬಸ್ ಸೌಲಭ್ಯವನ್ನು ಕಲ್ಪಿಸಲಾಗುವುದು	ಪ್ರಸಕ್ತ ವರ್ಷದಲ್ಲಿ ಬೇಡಗುಳಿ ಗ್ರಾಮಕ್ಕೆ ಸಾರಿಗೆ ಸೌಲಭ್ಯ ಒದಗಿಸುವ ಉದ್ದೇಶವಿದೆ. ನಿಗಮದ ವತಿಯಿಂದ ಗ್ರಾಮೀಣ ಅಭಿವೃದ್ಧಿ ಮತ್ತು

		ಪಂಚಾಯತ್ ರಾಜ್ ಇಲಾಖೆಯ ಸಹಯೋಗದೊಂದಿಗೆ ಮತ್ತೊಮ್ಮೆ ಸರ್ವೆ ಕಾರ್ಯ ನಡೆಸಿ ರಸ್ತೆ ದುರಸ್ಥಿಯಾದ ನಂತರ ನಿಗಮದ ವತಿಯಿಂದ ಸಾರಿಗೆ ಸೌಲಭ್ಯ ಕಲ್ಪಿಸಲಾಗುವುದು.

ಸಂಖ್ಯೆ: ಟಿಡಿ 229 ಟಿಸಿಕ್ಯೂ 2021

(ಬಿ.ಶ್ರೀರಾಮುಲು)
ಸಾರಿಗೆ ಮತ್ತು ಪರಿಶಿಷ್ಟ ಪಂಗಡಗಳ
ಕಲ್ಯಾಣ ಸಚಿವರು